ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ನಿಧನ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 12/10/2019

## ಸ್ಯಾಕ್ಸೋಫೋನ್ ವಾದಕ ಕದ್ರಿ ಗೋಪಾಲನಾಥ್ ವಿಧಿವಶ

ಮಂಗಳೂರು: ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ದೇಶದ ಖ್ಯಾತ ಸ್ಯಾಕ್ಸೋಫೋನ್ ವಾದಕ ಕದ್ರಿ ಗೋಪಾಲನಾಥ್ (70) ಶುಕ್ರವಾರ ವಿಧಿವಶರಾಗಿದ್ದಾರೆ. ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಮಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಇಂದು ಕೊನೆಯುಸಿರೆಳೆದರು.



ದಕ್ಷಿಣ ಕನ್ನಡದ ಬಂಟ್ವಾಳ ತಾಲೂಕಿನ ಸಜೀಪ ಮೂಡ ಗ್ರಾಮದ ಮಿತ್ತಕೆರೆ ಕದ್ರಿಯವರ ಹುಟ್ಟೂರು. ತಂದೆ ತನಿಯಪ್ಪ ನಾಗಸ್ವರ ವಿದ್ವಾಂಸರು. ಎಳವೆಯಲ್ಲಿಯೇ ಸಂಗೀತದಲ್ಲಿ ಆಸಕ್ತಿ ಹೊಂದಿದ್ದ ಅವರಿಗೆ ತಂದೆಯೇ ಗುರುವಾಗಿದ್ದರು. ವಿಶ್ವವಿಖ್ಯಾತ ಸ್ಯಾಕ್ಸೊಫೋನ್ ವಾದಕರಾಗಿ ಆಕಾಶವಾಣಿಯಲ್ಲಿ 'ಎ' ಶ್ರೇಣಿಯ ಕಲಾವಿದರಾಗಿದ್ದರು.

ವಿದೇಶಿ ವಾದ್ಯವನ್ನು ಸಂಪೂರ್ಣವಾಗಿ ತನ್ನದಾಗಿಸಿಕೊಂಡು ಅದಕ್ಕೆ ಭಾರತೀಯ ಸಂಗೀತವನ್ನು ಕರಗತ ಮಾಡಿಸಿದವರಲ್ಲಿ ಕದ್ರಿ ಗೋಪಾಲನಾಥರು ಪ್ರಮುಖರು.

ಪದ್ಮಶ್ರೀ ಪ್ರಶಸ್ತಿ, ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ, ತಮಿಳುನಾಡು ಸರಕಾರದ ಕಲೈಮಾಮಣಿ, ಕರ್ನಾಟಕ ಕಲಾಶ್ರೀ, ಗಾನಕಲಾ ಭೂಷಣ, ನಾದ ಗಂಧರ್ವ, ನಾದೋಪಾಸನ ಬ್ರಹ್ಮ ಸುನಾದ, ನಾದಕಲಾ ರತ್ನ, ನಾದಕಲಾನಿಧಿ, ಸಂಗೀತ ವಿದ್ಯಾರತ್ನ, ಸಂಗೀತ ರತ್ನ, ಶೃಂಗೇರಿ, ಮಂತ್ರಾಲಯ, ಅಹೋಬಿಲ ಮುಂತಾದ ಪೀಠಗಳಿಂದ ಸನ್ಮಾನ, ಕಂಚಿ ಕಾಮಕೋಟಿ ಆಸ್ಥಾನ ವಿದ್ವಾನ್, ಬೆಂಗಳೂರು ವಿಶ್ವವಿದ್ಯಾಲಯದ ಡಾಕ್ಟರೇಟ್ ಮುಂತಾದ ಅನೇಕ ಪ್ರಶಸ್ತಿ ಗೌರವಗಳು ಕದ್ರಿಯವರಿಗೆ ಸಂದಿವೆ.

ಪತ್ನಿ ಮತ್ತು ಪುತ್ರ ಕನ್ನಡ ಚಿತ್ರರಂಗದ ಸಂಗೀತ ನಿರ್ದೇಶಕ ಮಣಿಕಾಂತ್ ಕದ್ರಿ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ.

ಅ.14ರಂದು ನಗರದ ಪುರಭವನದ ಆವರಣದಲ್ಲಿ ಸಾರ್ವಜನಿಕರಿಗೆ ಕದ್ರಿಯವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಅವಕಾಶ ಕಲ್ಪಿಸಿ ಬಳಿಕ, ನಗರದ ಕದ್ರಿಯಲ್ಲಿರುವ ಯೋಗಿ ಸಮಾಜಕ್ಕೆ ಸೇರಿದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

8